3710(4714): ಶ್ರೀ ಈಶ್ವರಪ್ಪ ಕೆ.ಎಸ್.(ಶಿವಮೊಗ್ಗ); ಮಾನ್ಯ ಬಿ.ಸತ್ಯನಾರಾಯಣ (ಗ್ರಾಮೀಣ ನೀರು ಸರಬರಾಜು, ನೈರ್ಮಲ್ಯ ಮತ್ತು ಗ್ರಾಮೀಣಾಭಿವೃದ್ಧಿ ಇಂಜಿನಿಯರಿಂಗ್ ರಾಜ್ಯ ಸಚಿವರು); ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರು.

ಅ) ಶಿವಮೊಗ್ಗ ಗ್ರಾಮಾಂತರ ಪ್ರದೇಶದ ಕುಡಿಯುವ ನೀರಿನ ಸಮಸ್ಯೆಯು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಶಿವಮೊಗ್ಗ ವಿಧಾನಸಭಾ ಕ್ಷೇತ್ರಕ್ಕೆ ಎಷ್ಟು ಹಣ ಬಿಡುಗಡೆ ಮಾಡಲಾಗಿದೆ;

ಇ) ಉಳಿದ ಹಣ ಯಾವಾಗ, ಎಷ್ಟು ಬಿಡುಗಡೆ ಮಾಡಲಾಗುವುದು?

ಬಿ.ಸತ್ಯನಾರಾಯಣ (ಗ್ರಾಮೀಣ ನೀರು ಸರಬರಾಜು, ನೈರ್ಮಲ್ಯ ಮತ್ತು ಗ್ರಾಮೀಣಾಭಿವೃದ್ಧಿ ಇಂಜಿನಿಯರಿಂಗ್ ರಾಜ್ಯ ಸಚಿವರು)

ಅ) ಬಂದಿದೆ.

ಆ) ಶಿವಮೊಗ್ಗ ವಿಧಾನಸಭಾ ಕ್ಷೇತ್ರಕ್ಕೆ 2005–06ನೇ ಸಾಲಿನಲ್ಲಿ ಇದುವರೆವಿಗೂ ರೂ.4.25 ಲಕ್ಷ ಹಣ ಬಿಡುಗಡೆಯಾಗಿರುತ್ತದೆ.

ಇ) ಪ್ರಸಕ್ತ ಸಾಲಿನಲ್ಲಿ ಶಿವಮೊಗ್ಗ ಜಿಲ್ಲಾ ಪಂಚಾಯತ್‌ಗೆ ರಾಜ್ಯ ವಲಯದಡಿ ರೂ.124.00 ಲಕ್ಷ ಹಾಗೂ ಕೇಂದ್ರ ವಲಯದಡಿ ರೂ.255.34 ಲಕ್ಷ ಬಿಡುಗಡೆಯಾಗಿದ್ದು, ಅಗತ್ಯತೆಯಾನುಸಾರ ಕ್ರಿಯಾ ಯೋಜನೆ ತಯಾರಿಸಿ ಗ್ರಾಮ ಪಂಚಾಯತಿವಾರು ಅನುದಾನವನ್ನು ಸದರಿ ಜಿಲ್ಲಾ ಪಂಚಾಯತ್ ಬಿಡುಗಡೆ ಮಾಡುತ್ತದೆ.

3711(4715): ಶ್ರೀ ಗೋಪಾಲಪೂಜಾರಿ ಕೆ.(ಬೈಂದೂರು);

ಮಾನ್ಯ ಶ್ರೀ ಆರ್.ರಾಮಲಿಂಗಾರೆಡ್ಡಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು); ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರು.

ಅ) ಸರ್ಕಾರವು ಪ್ರಾಥಮಿಕ ಮತ್ತು ಮಾಧ್ಯಮಿಕ ಪಾಠಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಯಾವ ಯಾವ ಸವಲತ್ತುಗಳನ್ನು ನೀಡುತ್ತಿದೆ;

ಆ) ಅನುದಾನಿತ ಪಾಠ ಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಸರ್ಕಾರದ ಸವಲತ್ತುಗಳನ್ನು ಒದಗಿಸುವ ವಿಚಾರ ಸರ್ಕಾರದ ಮುಂದಿದೆಯೇ?

ಶ್ರೀ ಆರ್.ರಾಮಲಿಂಗಾರೆಡ್ಡಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು)